**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಮರಿತಿಬ್ಬೇಗೌಡ, ಶ್ರೀ ದಿನೇಶ ಗೂಳಿಗೌಡ ಹಾಗೂ ಶ್ರೀ ಮಧು ಜಿ.ಮಾದೇಗೌಡ ಅವರುಗಳು ನಿಯಮ-330 ರಡಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ಪ್ರಶ್ನೆ:**

ಕೃಷಿ ಇಲಾಖೆಯಲ್ಲಿ ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಗಳನ್ನು ವಿಲೀನಗೊಳಿಸಲು ಸಚಿವ ಸಂಪುಟದ ಉಪಸಮಿತಿಯಲ್ಲಿ ತೀರ್ಮಾನಿಸಿರುವುದು ಸರಿಯಷ್ಟೆ. ಇದರಿಂದ 2000ಕ್ಕೂ ಹೆಚ್ಚು ಸರ್ಕಾರಿ ಹುದ್ದೆಗಳನ್ನು ಕಡಿತಗೊಳಿಸುತ್ತಿರುವುದು ಹಾಗೂ ವಿಲೀನಗೊಳಿಸುತ್ತಿರುವುದರಿಂದ ತೋಟಗಾರಿಕೆ ಮತ್ತು ರೇಷ್ಮೆ ಅಭಿವೃದ್ಧಿ ಕುಂಠಿತವಾಗುವುದಲ್ಲದೆ ರೈತರಿಗೆ ಬಹಳ ತೊಂದರೆಯುಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ:**

ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ದಿ:11.10.2022 ರಂದು ನಡೆದ ಸರ್ಕಾರದ ವಿವಿಧ ಇಲಾಖೆ / ಕಛೇರಿಗಳ ವಿಲೀನತೆ / ರದ್ದುಗೊಳಿಸುವಿಕೆಗೆ, ಮಂಜೂರಾಗಿರುವ ವಿವಿಧ ವೃಂದಗಳ ವೃಂದ ಬಲದ ವೈಜ್ಞಾನಿಕ ಪರಿಷ್ಕರಣೆಗೆ/ ಹುದ್ದೆಗಳ ರದ್ದತಿ / ಮರು ವಿನ್ಯಾಸ / 6ನೇ ವೇತನ ಆಯೋಗವು ಮಾಡಿರುವ ಶಿಫಾರಸ್ಸುಗಳು ಇವುಗಳ ಕುರಿತು ಪರಿಶೀಲಿಸಿ ಸೂಕ್ತ ಶಿಫಾರಸುಗಳನ್ನು ಮಾಡಲು ರಚಿಸಿರುವ ಸಚಿವ ಸಂಪುಟ ಉಪ ಸಮಿತಿ ಸಭೆಯಲ್ಲಿ ಸಚಿವಾಲಯ ಹಂತದಲ್ಲಿ ಕೃಷಿ ಇಲಾಖೆ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯನ್ನು ವಿಲೀನಗೊಳಿಸಬಹುದು ಹಾಗೂ ಕೃಷಿ ಇಲಾಖೆಯಡಿ ಬರುವ ಕೃಷಿ ಇಲಾಖೆ ಮತ್ತು ವಾಟರ್ ಶೆಡ್ ನಿರ್ದೇಶನಾಲಯವನ್ನು ಸಹ ವಿಲೀನಗೊಳಿಸಬಹುದು ಎಂದು ಅಭಿಪ್ರಾಯಿಸಲಾಗಿದೆ ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

**HORTI 613 HGM 2022**

(ಮುನಿರತ್ನ)
ತೋಟಗಾರಿಕೆ ಹಾಗೂ ಯೋಜನೆ, ಕಾರ್ಯಕ್ರಮ
ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು